**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ವಾದಿ ಪರವಾಗಿ ಶ್ರೀ ಡಿ.ಬಿ.ಕೆ ವಕೀಲರಿಂದ:**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈ ದಾವೆಗೆ ಪೂರಕವಾಗಿ ನಾನು ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ. ಸಾಕ್ಷಿ ಹಾಜರುಪಡಿಸಿದ ದಾಖಲೆಗಳನ್ನು ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿ.ಪಿ.–1 | ಇ–ಸ್ವತ್ತು ದಾಖಲೆ |
| ನಿ.ಪಿ.–2 | ಹಿಂಬರಹ |
| ನಿ.ಪಿ.–3 | ಸಹಾಯ ಕಾರ್ಯ ನಿರ್ವಾಹಕ ಅಭಿಯಂತರರ ಪತ್ರ |
| ನಿ.ಪಿ.–4 ರಿಂದ 6 | ವಿದ್ಯುತ್ ಬಿಲ್ ಪಾವತಿ ರಶೀದಿಗಳು |
| ನಿ.ಪಿ.–7 | ವಿದ್ಯುತ್ ಪರಿಕರಗಳನ್ನು ಖರೀದಿ ಮಾಡಿದ ಬಗ್ಗೆ ರಶೀದಿ |
| ನಿ.ಪಿ.–8 | ಕೆಲಸದ ಆದೇಶ |
| ನಿ.ಪಿ.–9 ಮತ್ತು 10 | ಸ್ವಯಂ ಆಸ್ತಿ ತೆರಿಗೆ ನಿರ್ಧಾರಣ ನಮೂನೆಗಳು |
| ನಿ.ಪಿ.–11 ರಿಂದ 13 | ಕಂದಾಯ ಪಾವತಿ ರಶೀದಿಗಳು |
| ನಿ.ಪಿ.–14 | ವಿದ್ಯುತ್ ಬಿಲ್ |

**ಈ ಹಂತದಲ್ಲಿ ಸಾಕ್ಷಿ ಕಡೆಯಿಂದ ಮತ್ತಷ್ಟು ದಾಖಲೆಗಳನ್ನು ಹಾಜರು ಪಡಿಸುವ ಸಲುವಾಗಿ ವಾದಿ ಪರ ವಕೀಲರು ಕೋರಿದ್ದರಿಂದ ಮುಂದುವರೆದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**